Dt.15.04.2025

Crl.Mis.No: 297/2024 PW.1

( ದಿ:**15.04.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು)

ಪಿ.ಡಬ್ಲ್ಯೂ.**1** ರವರ ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದ:

ನಾನು ಈ ಪ್ರಕರಣದಲ್ಲಿ ಅರ್ಜಿದಾರಳಾಗಿದ್ದು, ಈ ದಿನ ನನ್ನ ಮುಖ್ಯ ವಿಚಾರಣೆಯ ಹೇಳಿಕೆಯನ್ನು ಪ್ರಮಾಣ ಪತ್ರ ರೂಪದಲ್ಲಿ ಹಾಜರುಪಡಿಸಿದ್ದೇನೆ. ಅದರಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯ ಮತ್ತು ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿ, ಸಹಿ ಮಾಡಿರುತ್ತೇನೆ.

ನನ್ನ ಮತ್ತು **1** ನೇ ಎದುರುದಾರನ ವಿವಾಹದ ಎರಡು ಫೋಟೋಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–**1** ಮತ್ತು **2** ಎಂದು ಗುರುತಿಸಲಾಯಿತು. ನನ್ನ ಮತ್ತು **1** ನೇ ಎದುರುದಾರನ ವಿವಾಹದ ಆಮಂತ್ರಣ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–**3** ಎಂದು ಗುರುತಿಸಲಾಯಿತು. ಸಿದ್ದಮ್ಮಾಜಿಹೊಸೂರು ಗ್ರಾಮದ ಸರ್ವೆ ನಂಬರ್ **5** ಕ್ಕೆ ಸಂಬಂಧಿಸಿದಂತೆ **2023–2024** ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–**4** ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಮುಂದೂಡಲಾಯಿತು)

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು,
ಹೊಳಲ್ಕೆರೆ.